# <u>ಕರ್ನಾಟಕ ವಿಧಾನ ಪರಿಷತ್ತು</u>

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 518
ಮಾನ್ಯ ಸದಸ್ಯರ ಹೆಸರು : ಶ್ರೀ ಸುನೀಲ್ ವಲ್ಯಾಪೂರ್
(ವಿಧಾನಸಭೆಯಿಂದ ಚುನಾಯಿತರಾದವರು),
ಉತ್ತರಿಸುವ ದಿನಾಂಕ : **14.08.2025**
ಉತ್ತರಿಸುವವರು : ಮಾನ್ಯ ಮುಖ್ಯಮಂತ್ರಿಗಳು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಸರ್ಕಾರಿ ನೌಕರರಿಗೆ ಪ್ರಸ್ತುತ ಜಾರಿಯಲ್ಲಿರುವ ರಾಷ್ಟ್ರೀಯ ಪಿಂಚಣಿ ಯೋಜನೆ (ಎನ್.ಪಿ.ಎಸ್) ಅಡಿಯಲ್ಲಿ ಎಷ್ಟು ಜನ ನೌಕರರು ಕಾರ್ಯನಿರ್ವಹಿಸುವರು: | ರಾಷ್ಟ್ರೀಯ ಪಿಂಚಣಿ ಯೋಜನೆಗೆ ಒಳಪಡುವ ನೌಕರರ ಸಂಖ್ಯೆ-2,86,600 (ದಿನಾಂಕ:04.08.2025ರಲ್ಲಿ HRMS ನಲ್ಲಿ ಇದ್ದಂತೆ) |
| ಆ) | ಈ ಯೋಜನೆ ಸರ್ಕಾರಿ ನೌಕರರ ನಿವೃತ್ತಿ ನಂತರದ ಬದುಕಿಗೆ ಮಾರಕವಾಗಿದ್ದು, ಇದನ್ನು ರದ್ದು ಪಡಿಸಿ ಹಳೆ ಪಿಂಚಣಿ ಯೋಜನೆ ಮರು ಜಾರಿ ಮಾಡುವಂತೆ ಸರ್ಕಾರಿ ನೌಕರರು ಆಗ್ರಹಿಸುತ್ತಿರುವುದು ಸರ್ಕಾರದ ಗಮನದಲ್ಲಿದೆಯೇ; | ರಾಜ್ಯದಲ್ಲಿ ಜಾರಿಯಲ್ಲಿರುವ ರಾಷ್ಟ್ರೀಯ ಪಿಂಚಣಿ ಯೋಜನೆಗೆ ಸೂಕ್ತ ಬದಲಾವಣೆ / ಮಾರ್ಪಾಡು ಮಾಡಲು ಸಮಗ್ರವಾಗಿ ಪರಿಶೀಲಿಸಲು ಈಗಾಗಲೇ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ದಿನಾಂಕ: 11.12.2018ರ ಮತ್ತು ದಿನಾಂಕ: 01.03.2023 ರ ಸರ್ಕಾರಿ ಆದೇಶಗಳನ್ವಯ ರಚಿಸಲಾಗಿರುವ ಸಮಿತಿಯನ್ನು ದಿನಾಂಕ: 16.08.2024ರಲ್ಲಿ ಪುನರ್ ರಚಿಸಿ ಆದೇಶಿಸಲಾಗಿರುತ್ತದೆ.<br><br>ರಾಷ್ಟ್ರೀಯ ಪಿಂಚಣಿ ಯೋಜನೆಗೆ ಬದಲಾವಣೆ/ಮಾರ್ಪಾಡು ಮಾಡಿರುವ ರಾಜ್ಯಗಳಾದ ಆಂಧ್ರ ಪ್ರದೇಶ ಮತ್ತು ಹಿಮಾಚಲ ಪ್ರದೇಶ ರಾಜ್ಯಗಳಿಗೆ ಅಧಿಕಾರಿಗಳನ್ನೊಳಗೊಂಡ ತಂಡಗಳು ಅಧ್ಯಯನ ನಡೆಸಿ ವರದಿಗಳನ್ನು ಸಮಿತಿಗೆ ಸಲ್ಲಿಸಲಾಗಿದೆ. ಸಮಿತಿಯ ವರದಿಯನ್ನು ನಿರೀಕ್ಷಿಸಲಾಗಿದೆ. |
| ಇ) | ಇದ್ದಲ್ಲಿ, ಹಳೆ ಪಿಂಚಣಿ ಯೋಜನೆಯನ್ನು ಮರು ಜಾರಿ ಮಾಡಲಾಗುವುದು ಎಂದು ಸರ್ಕಾರಿ ನೌಕರರಿಗೆ ಸರ್ಕಾರ ಭರವಸೆ ನೀಡಲಾಗಿದೆಯೇ; | |
| ಈ) | ಸರ್ಕಾರಿ ನೌಕರರಿಗೆ ಹಳೆ ಪಿಂಚಣಿ ಯೋಜನೆಯನ್ನು ಮರು ಜಾರಿ ಮಾಡಿರುವ ದೇಶದ ಬೇರೆ ಬೇರೆ ರಾಜ್ಯಗಳ ಮಾದರಿಯನ್ನು ಪರಿಶೀಲಿಸಿ ವರದಿ ನೀಡಲು ರಚಿಸಿದ ಸಮಿತಿ ಸರ್ಕಾರಕ್ಕೆ ವರದಿಯನ್ನು ಸಲ್ಲಿಸಿದೆಯೇ; | |
| ಉ) | ಈ ಕುರಿತು ರಚಿಸಿರುವ ಆರ್ಥಿಕ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಯವರ ನೇತೃತ್ವದ ಸಮಿತಿಯು ಸರ್ಕಾರಕ್ಕೆ ವರದಿ ಸಲ್ಲಿಸಲು ವಿಳಂಬ ಮಾಡುತ್ತಿರುವುದೇಕೆ; | |
| ಊ) | ಇದರಿಂದ ನೌಕರರು ಆತಂಕದಲ್ಲಿದ್ದು ನಿವೃತ್ತಿ ನಂತರದ ಗೌರವಯುತ ಬದುಕಿಗೆ ಅವಕಾಶ ಮಾಡಿಕೊಡುವ ಹಳೆ ಪಿಂಚಣಿ ಯೋಜನೆ ಮರು ಜಾರಿಗಾಗಿ ನಿರಂತರ ಹೋರಾಟ ಮಾಡುತ್ತಿದ್ದು ಇದರಿಂದ ಆಡಳಿತ ಯಂತ್ರದ ಮೇಲೆ ಪ್ರತಿಕೂಲಕ ಪರಿಣಾಮ ಬೀರುವುದಿಲ್ಲವೇ; | |
| ಋ) | ಸರ್ಕಾರಿ ನೌಕರರಿಗೆ ಚುನಾವಣಾ ಪ್ರಣಾಳಿಕೆಯಲ್ಲಿ ಕೊಟ್ಟ ಮಾತಿನಂತೆ ಹಳೆ ಪಿಂಚಣಿ ಯೋಜನೆಯನ್ನು ಯಾವಾಗ ಮರು ಜಾರಿ ಮಾಡಲಾಗುವುದು? (ಮಾಹಿತಿ ನೀಡುವುದು) | |

**ಆಇ- ಪಿಇಎನ್/438/2025**

(ಸಿದ್ದರಾಮಯ್ಯ)
ಮುಖ್ಯಮಂತ್ರಿ